# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 164 | Pages. 2 | Date: 06-06-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 164 - ಪುಟಗಳು : 2 | 06-06-2026 | ಶನಿವಾರ | Ph: 8762954248 | ದರ : ₹1


# ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಕರ್ತವ್ಯ

## ಹೆಚ್ಚುವರಿ ನ್ಯಾಯಾಧೀಶ ಪದ್ಮ ಪ್ರಸಾದ್ | ಜಿಲ್ಲಾದ್ಯಂತ ಪರಿಸರ ದಿನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪರಿಸರ ಸಂರಕ್ಷಣೆ ಮಾಡುವ ಮೂಲಕ ಭೂಮಿಯನ್ನು ಉಳಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ 1972 ರಿಂದ ಪರಿಸರ ದಿನವನ್ನು ಪ್ರತಿ ವರ್ಷ ಜೂನ್ 5 ರಂದು ಆಚರಣೆ ಮಾಡುತ್ತಿದ್ದೇವೆ ಎಂದು ಕೌಟುಂಬಿಕ ನ್ಯಾಯಾಲಯದ ಒಂದನೇ ಹೆಚ್ಚುವರಿ ಪ್ರಧಾನ ನ್ಯಾಯಾಧೀಶ ಪದ್ಮ ಪ್ರಸಾದ್ ಹೇಳಿದರು.

ಹಾಸನಾಂಬ ಕಲಾಕ್ಷೇತ್ರದಲ್ಲಿ ಶುಕ್ರವಾರ ಜಿಲ್ಲಾಡಳಿತ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಅರಣ್ಯ ಇಲಾಖೆ, ಮಹಾ ನಗರ ಪಾಲಿಕೆ, ಹಾಸನ ಮತ್ತು ಕೈಗಾರಿಕೆಗಳ ಸಹಯೋಗದೊಂದಿಗೆ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಪರಿಸರದಲ್ಲಿ ಹೆಚ್ಚಾಗುತ್ತಿರುವ ಶಾಖದ ಅಲೆಗಳಿಂದ ಹಿಮಾಲಯದ ಪರ್ವತಗಳು ಕರಗಿ ಹರಿಯುತ್ತಿವೆ. ಆದ್ದರಿಂದ ಭೀಕರ ಬಿರುಗಾಳಿ, ಚಂಡಮಾರುತ ಜೀವ ವೈವಿಧ್ಯತೆಗಳ ಮೇಲೆಗಳ ಪರಿಣಾಮ ಬೀರುತ್ತಿವೆ ಎಂದು ತಿಳಿಸಿದರು.

ಪ್ರಕೃತಿಯಿಂದ ಪ್ರೇರೇಪಿತರಾಗಿ ಜಗತ್ತನ್ನು ಹವಮಾನದಿಂದ ಉಳಿಸಿಕೊಳ್ಳುವ ಪ್ರಯತ್ನ ಮಾಡಬೇಕು ಮತ್ತು ವಾಯು ಮಾಲಿನ್ಯದಲ್ಲಿ ಆಗುವ ಕಲುಷಿತ ಪ್ರಮಾಣವನ್ನು ಕಡಿಮೆ ಮಾಡಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಮಾತನಾಡಿ, ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿ ಟ್ಟುಕೊಳ್ಳುವುದು ಪ್ರತಿಯೊಬ್ಬ ನಾಗರಿಕರ ಕರ್ತವ್ಯ ಮತ್ತು ಜವಾಬ್ದಾರಿ. ಸ್ವಚ್ಛವಾದ ಪರಿಸರದ ಬಗ್ಗೆ ಭಾಷಣ, ಪ್ರಬಂಧ, ಚಿತ್ರಕಲೆ ಸ್ಪರ್ಧೆ ಮಾಡುವುದಲ್ಲ ಸ್ವಚ್ಛತೆಯನ್ನು ಅನುಸರಿಸುವುದು ಹಾಗೂ ಸ್ವಚ್ಛತೆ ಇದ್ದಲ್ಲಿ ಮಾತ್ರ ಹಸಿರು ಇರಲು ಸಾಧ್ಯ ಎಂದು ತಿಳಿಸಿದರು.

ಪ್ರತಿ ಮನೆಯಲ್ಲಿಯು ಎಲ್ಲರೂ ಒಣ ಕಸ, ಹಸಿ ಕಸ ವಿಂಗಡಣೆ ಮತ್ತು ಪ್ಲಾಸ್ಟಿಕ್ ನಿಯಂತ್ರಣ ಮಾಡಿ ಪರಿಸರಕ್ಕೆ ಪೂರಕವಾದ ಕೆಲಸ ಮಾಡಬೇಕು, ಎಲ್ಲಾ ಇಲಾಖೆಯ ವತಿಯಿಂದ ಈ ವರ್ಷ 7 ರಿಂದ 8 ಲಕ್ಷ ಸಸಿಗಳನ್ನು ಜೂನ್ ತಿಂಗಳಿನಿಂದ ಆಗಸ್ಟ್ ತಿಂಗಳ ವರೆಗೆ ನೆಡಲು ನಿರ್ಧರಿಸಲಾಗಿದೆ. ಪರಿಸರವನ್ನು ಸ್ವಚ್ಛವಾಗಿ ಇಡಲು ಬೇರೊಬ್ಬರಿಂದ ಹೇಳಿ ತಿಳಿದುಕೊಳ್ಳುವುದಲ್ಲ ನಮ್ಮಿಂದಲೇ ಪರಿಸರವನ್ನು ಸ್ವಚ್ಛವಾಗಿಡಲು ಪ್ರಯತ್ನ ಪಡಬೇಕು ಎಂದು ಹೇಳಿದರು.

ಪರಿಸರ ಅಧಿಕಾರಿ ಭಾಸ್ಕರ್ ಪ್ರಾಸ್ತಾವಿಕವಾಗಿ ಮಾತನಾಡಿ, ಸಾರ್ವಜನಿಕರಲ್ಲಿ ಪರಿಸರದ ಬಗ್ಗೆ ಜಾಗೃತಿ ಮೂಡಿಸಬೇಕು ಮತ್ತು ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛತೆಯಿಂದ ಕಾಪಾಡಿಕೊಳ್ಳಬೇಕು. ಪರಿಸರ ಸಂರಕ್ಷಣೆ ಮಾಡುವುದು ಎಲ್ಲಾರ ಗುರಿ, ಧ್ಯೇಯ, ಕರ್ತವ್ಯವಾಗಿರಬೇಕು ಮತ್ತು ಪ್ರಕೃತಿಯನ್ನು ಸಂರಕ್ಷಣೆ ಮಾಡುವ ಕಡೆ ಗಮನಹರಿಸಿ, ಮಾಲಿನ್ಯ ಮಾಡುವವರಿಗೆ ದಂಡ ಹಾಗೂ ಪ್ಲಾಸ್ಟಿಕ್ ಬಳಕೆ ಮಾಡುವವರಿಗೆ ದಂಡ ಮತ್ತು ಶಿಕ್ಷೆಯನ್ನು ವಿಧಿಸಲಾಗುವುದು ಎಂದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಜಿ.ಕೆ. ದಾಕ್ಷಾಯಿಣಿ, ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ಡಿ.ವೈ.ಎಸ್.ಪಿ ಪರಶುರಾಮ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಪರಿಸರಕ್ಕೆ ನಮ್ಮ ಕೊಡುಗೆ ಪ್ರಶ್ನಿಸಿಕೊಳ್ಳಿ: ಸಂಸದ ಶ್ರೇಯಸ್



ಹಾಸನ: ಪರಿಸರ ಸಂರಕ್ಷಣೆ ಕೇವಲ ಸರ್ಕಾರ ಅಥವಾ ಕೆಲ ಸಂಘ-ಸಂಸ್ಥೆಗಳ ಹೊಣೆಗಾರಿಕೆಯಲ್ಲ, ಅದು ಪ್ರತಿಯೊಬ್ಬ ನಾಗರಿಕನ ಸಾಮಾಜಿಕ ಜವಾಬ್ದಾರಿಯಾಗಿದೆ ಎಂದು ಸಂಸದ ಶ್ರೇಯಸ್ ಎಂ. ಪಟೇಲ್ ತಿಳಿಸಿದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ನಗರದ ಹುಣಸಿನಕೆರೆ ಸಮೀಪದ 80 ಅಡಿ ರಸ್ತೆ ನಡುವಿನ ಡಿವೈಡರ್ ಉದ್ದಕ್ಕೂ ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರಕೃತಿ ಮಾನವನಿಂದ ಯಾವುದೇ ಪ್ರತಿಫಲ ನಿರೀಕ್ಷಿಸದೆ ಅನೇಕ ಅಮೂಲ್ಯ ಕೊಡುಗೆ ನೀಡುತ್ತಿದೆ. ಶುದ್ಧ ಗಾಳಿ, ನೀರು, ನೆರಳು, ಆಹಾರ ಸೇರಿದಂತೆ ಜೀವ ಉಳಿಸಲು ಅಗತ್ಯವಿರುವ ಎಲ್ಲ ಸಂಪನ್ಮೂಲಗಳನ್ನು ಪರಿಸರವೇ ಒದಗಿಸುತ್ತಿದೆ. ಆದರೆ ನಾವು ಪರಿಸರಕ್ಕೆ ಏನು ಕೊಡುಗೆ ನೀಡುತ್ತಿದ್ದೇವೆ ಎಂಬ ಪ್ರಶ್ನೆಯನ್ನು ಪ್ರತಿಯೊಬ್ಬರೂ ಕೇಳಿಕೊಳ್ಳಬೇಕಾಗಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ನಗರೀಕರಣ, ಅರಣ್ಯ ನಾಶ, ಪ್ಲಾಸ್ಟಿಕ್ ಬಳಕೆ ಹಾಗೂ ಪರಿಸರ ಮಾಲಿನ್ಯದಿಂದಾಗಿ ಪ್ರಕೃತಿಯ ಸಮತೋಲನ ಹದಗೆಡುತ್ತಿದೆ. ಪರಿಣಾಮವಾಗಿ ಹವಾಮಾನ ವೈಪರೀತ್ಯ, ನೀರಿನ ಕೊರತೆ, ಉಷ್ಣಾಂಶ ಏರಿಕೆ ಸೇರಿದಂತೆ ಹಲವು ಸಮಸ್ಯೆ ಎದುರಾಗುತ್ತಿವೆ.

ಇಂತಹ ಸಂದರ್ಭದಲ್ಲಿ ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಮೂಲಕ ಪರಿಸರ ಸಂರಕ್ಷಣೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪಾಲಿಕೆ ಆಯುಕ್ತ ಕೃಷ್ಣಮೂರ್ತಿ, ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿ, ಪೌರಕಾರ್ಮಿಕರು, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಗಿಡ ನೆಟ್ಟು ಪರಿಸರ ಸಂರಕ್ಷಣೆ ಸಂದೇಶ ಸಾರಿದರು.

# ಬಾಳ್ಳುಪೇಟೆಯಲ್ಲಿ ವಿಶ್ವ ಪರಿಸರ ದಿನಾಚರಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಬಾಳ್ಳುಪೇಟೆಯ ನಿರಂತರ ಯೋಗ ಬಳಗ ವತಿಯಿಂದ ಕೆಂಚಮ್ಮ ಮಲ್ಲೇಗೌಡ ಸಮುದಾಯ ಭವನದ ಆವರಣದಲ್ಲಿ ಗಿಡ ನೆಡುವ ಮೂಲಕ ಅರ್ಥಪೂರ್ಣವಾಗಿ ಪರಿಸರ ದಿನ ಆಚರಿಸಲಾಯಿತು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ಪರಿಸರ ಸಮತೋಲನ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಕೇವಲ ಪರಿಸರ ದಿನದಂದು ಮಾತ್ರವಲ್ಲದೆ ಪ್ರತಿದಿನವೂ ಪರಿಸರ ಸಂರಕ್ಷಣೆಯ ಮನೋಭಾವ ಬೆಳೆಸಿಕೊಳ್ಳಬೇಕು. ಮರಗಳನ್ನು ನೆಡುವುದಷ್ಟೇ ಅಲ್ಲ, ಅವುಗಳನ್ನು ಬೆಳೆಸಿ ಸಂರಕ್ಷಿಸುವ ಜವಾಬ್ದಾರಿಯನ್ನೂ ಪ್ರತಿಯೊಬ್ಬರೂ ಹೊತ್ತುಕೊಳ್ಳಬೇಕಿದೆ ಎಂದು ತಿಳಿಸಿದರು.

ಈ ವೇಳೆ ಯೋಗ ಬಳಗದ ಸದಸ್ಯರು ಪರಿಸರ ಉಳಿವಿನ ಕುರಿತು ಜಾಗೃತಿ ಮೂಡಿಸಿ, ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡುವುದು, ನೀರಿನ ಸಂರಕ್ಷಣೆ, ಸ್ವಚ್ಛತೆ ಹಾಗೂ ಹಸಿರು ವಾತಾವರಣ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಸಂದೇಶ ನೀಡಿದರು.

ಕಾರ್ಯಕ್ರಮದ ಅಂಗವಾಗಿ ವಿವಿಧ ಜಾತಿಯ ನೆರಳು ಹಾಗೂ ಹಣ್ಣಿನ ಗಿಡಗಳನ್ನು ನೆಡಲಾಯಿತು. ಭವಿಷ್ಯದ ಪೀಳಿಗೆಗೆ ಆರೋಗ್ಯಕರ ಮತ್ತು ಹಸಿರು ಪರಿಸರವನ್ನು ನೀಡುವ ಸಂಕಲ್ಪವನ್ನು ಸದಸ್ಯರು ಕೈಗೊಂಡರು.

ಕಾರ್ಯಕ್ರಮದಲ್ಲಿ ಯೋಗ ಬಳಗದ ಪದಾಧಿಕಾರಿಗಳು, ಸದಸ್ಯರು, ಸ್ಥಳೀಯ ಸಾರ್ವಜನಿಕರು, ಯುವಕರು ಹಾಗೂ ಪರಿಸರ ಪ್ರೇಮಿಗಳು ಭಾಗವಹಿಸಿ ಗಿಡ ನೆಡುವ ಮೂಲಕ ಪರಿಸರ ಸಂರಕ್ಷಣೆಯ ಪ್ರತಿಜ್ಞೆ ಸ್ವೀಕರಿಸಿದರು.

# ಪ್ರಕೃತಿ ಉಳಿಸುವುದು ನಮ್ಮೆಲ್ಲರ ಹೊಣೆ: ಸಿಮೆಂಟ್ ಮಂಜು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಪ್ರಕೃತಿ ಇರುವೆಡೆ ಸೌಂದರ್ಯ ಇರುತ್ತದೆ. ನಮ್ಮ ಊರಿನ ಸೌಂದರ್ಯ ಹೆಚ್ಚಿಸಬೇಕಾದರೆ ಹಸಿರು ಹೆಚ್ಚಿಸಬೇಕು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲೂಕಿನ ಮಳಲಿ ಗ್ರಾಮದ ಪುರಸಭೆಯ ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ವಿಶ್ವ ಪರಿಸರ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಸಕಲೇಶಪುರದ ಪ್ರಕೃತಿ ಸಂಪತ್ತನ್ನು ಮುಂದಿನ ಪೀಳಿಗೆಗೆ ಉಳಿಸಿಕೊಡುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರ ಏಕ್ ಪೇಡ್ ಮಾಂ ಕೆ ನಾಮ್ ಅಭಿಯಾನದಡಿ ಪ್ರತಿಯೊಬ್ಬರೂ ತಮ್ಮ ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಟ್ಟು ಪೋಷಿಸುವಂತೆ ಕರೆ ನೀಡಿದರು. ತಾಲೂಕಿನ 26 ಗ್ರಾಮ ಪಂಚಾಯಿತಿಗಳಲ್ಲಿ ಸುಮಾರು 52 ಸಾವಿರ ಸಸಿಗಳನ್ನು ನೆಡುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಉಪವಿಭಾಗಾಧಿಕಾರಿ ಹುಲುಮನಿ ತಿಮ್ಮಣ್ಣ ಮಾತನಾಡಿ, ಪರಿಸರ ನಾಶ ಮುಂದುವರಿದರೆ ಮುಂದಿನ ದಿನಗಳಲ್ಲಿ ಆಮ್ಲಜನಕದ ಮಹತ್ವ ಇನ್ನಷ್ಟು ಹೆಚ್ಚಾಗಲಿದೆ ಎಂದು ಎಚ್ಚರಿಸಿದರು. ತಹಸೀಲ್ದಾರ್ ಸುಪ್ರೀತಾ, ಪ್ರಕೃತಿ ಸಂಪನ್ಮೂಲಗಳನ್ನು ಮಿತವಾಗಿ ಬಳಸುವ ಜೀವನಶೈಲಿ ರೂಢಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗಿಡ ನೆಡುವಿಕೆ ಹಾಗೂ ಪರಿಸರ ಸಂರಕ್ಷಣೆಯ ಪ್ರತಿಜ್ಞಾ ವಿಧಿ ನಡೆಯಿತು. ಪುರಸಭಾ ಮುಖ್ಯಾಧಿಕಾರಿ ಮಹೇಶ್ವರಪ್ಪ, ಇಒ ಗಂಗಾಧರ್, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮಧುಸೂಧನ್, ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪರಿಸರ ಸಮತೋಲನ ಕಾಪಾಡದಿದ್ದರೆ ಭವಿಷ್ಯದಲ್ಲಿ ಕಷ್ಟ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಪರಿಸರ ಸಮತೋಲನ ಕಾಪಾಡದಿದ್ದರೆ ಮುಂದಿನ ಪೀಳಿಗೆಯು ಅನೇಕ ನೈಸರ್ಗಿಕ ಅಪಾಯ ಎದುರಿಸಬೇಕಾಗುತ್ತದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಎಚ್ಚರಿಸಿದರು.

ಪಟ್ಟಣದ ಬೆಲಸಿಂದ ಪ್ರಕೃತಿ ವನದಲ್ಲಿ ಅರಣ್ಯ ಇಲಾಖೆ, ಸಾಮಾಜಿಕ ಹಾಗೂ ಪ್ರಾದೇಶಿಕ ವಲಯ ಅರಣ್ಯ, ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ ಮತ್ತು ಭೂಮಿ ಉಳಿಸಿ ಆಂದೋಲನ ಸಮಿತಿಯ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾರಣೆ ಅಂಗವಾಗಿ ಮಿಯಾವಾಕಿ ಮಾದರಿ ಕಾಡು ಬೆಳೆಸುವ ಕಾರ್ಯಕ್ರಮಕ್ಕೆ ಶುಕ್ರವಾರ ಚಾಲನೆ ನೀಡಿ ಮಾತನಾಡಿದರು.

ಪರಿಸರ ಸಮತೋಲ ಸ್ಥಿತಿಯುಲ್ಲಿದ್ದರೆ ಕಾಲಕಾಲಕ್ಕೆ ಮಳೆಯಾಗುತ್ತಿದೆ. ಮಳೆಯಾದರೆ ಸಕಲ ಜೀವರಾಶಿಗಳಿಗೂ ಕುಡಿಯಲು ನೀರು ಮತ್ತು ಆಹಾರ ಸಿಗುತ್ತದೆ. ಇಲ್ಲದಿದ್ದರೆ ಕಾಡುವಾಸಿ ಪ್ರಾಣಿಗಳು ನಾಡಿಗೆ ದಾಳಿ ಇಡುತ್ತವೆ. ಆಹಾರ ಮತ್ತು ನೀರು ಸಿಗದೇ ಸಾವನ್ನಪ್ಪುತ್ತವೆ. ಇತ್ತೀಚೆಗೆ ಆನೆಗಳು ಜನವಸತಿ ಪ್ರದೇಶಗಳತ್ತ ಆಗಮಿಸಿ ಹಲವು ತೊಂದರೆಗಳನ್ನು ಮನುಷ್ಯನಿಗೆ ನೀಡುತಿರುವುದು ಪರಿಸರ ನಾಶದ ದುಷ್ಪರಿಣಾಮದ ಒಂದು ಉದಾಹರಣೆಯಾಗಿದೆ ಎಂದು ಹೇಳಿದರು.

ಹಾಗಾಗಿ ಮುಂದಿನ ಪೀಳಿಗೆಯ ಹಿತದೃಷ್ಟಿಯಿಂದ ಪರಿಸರ ಉಳಿಸುವುದು ಕೇವಲ ಅರಣ್ಯ ಇಲಾಖೆ ಜವಾಬ್ದಾರಿಯಲ್ಲ. ಇಡೀ ಸಮುದಾಯದ ಜವಾಬ್ದಾರಿಯಾಗಿದೆ. ಪರಿಸರ ದಿನಾಚರಣೆ ಎಂದರೆ ಕೇವಲ ಅಂದು ಸಸಿ ನೆಡುವುದಲ್ಲ ನೆಟ್ಟ ಸಸಿಯನ್ನು ವರ್ಷದುದ್ದಕ್ಕೂ ಸಂರಕ್ಷಿಸುವ ಅದಕ್ಕೆ ನೀರುಣಿಸುವ ಪೋಷಿಸುವ ಕಾರ್ಯ ಆಗಬೇಕು ಎಂದರು.

The United States, the United States of America, and the United Kingdom of Great Britain and Northern Ireland are the world's largest economies. The United States of America is the world's largest economy. ದಿನೇ ದಿನೇ ಹೆಚ್ಚುತ್ತಿರುವ ಭೂಮಿಯ ತಾಪಮಾನವನ್ನು ಕಡಿಮೆ ಮಾಡಲು ಹಾಗೂ ಹಸಿರನ್ನು ಹೆಚ್ಚಿಸಿ ಶುದ್ಧ ಗಾಳಿಯನ್ನು ಪಡೆಯಲು ಪ್ರತಿಯೊಬ್ಬ ಮಗು, ಪ್ರತಿಯೊಬ್ಬ ನಾಗರಿಕರು ಮರಗಿಡಗಳನ್ನು ನೆಟ್ಟು ಉಳಿಸಿ ಬೆಳೆಸಬೇಕಾದ ಅಗತ್ಯವಿದೆ ಎಂದು ಸಲಹೆ ನೀಡಿದರು.

ಗಾಳಿ, ನೀರು ಮತ್ತು ಹಸಿರು ಪರಿಸರವನ್ನು ಮುಂದಿನ ಪೀಳಿಗೆಗೆ ಉಳಿಸುವುದು ನಮ್ಮೆಲ್ಲರ ಜವಾಬ್ದಾರಿ, ಕಾಡಿನ ನಾಶ ನಿಲ್ಲಿಸಿ, ಹೆಚ್ಚೆಚ್ಚು ಸಸಿ ನೆಡುವ ಮೂಲಕ ಪರಿಸರ ಉಳಿಸುವ ಕೆಲಸವನ್ನು ತುರ್ತಾಗಿ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ.

ತಾಲೂಕಿನಾದ್ಯಂತ ಪರಿಸರ ಸಂರಕ್ಷಣೆ ಮತ್ತು ಹಸಿರೀಕರಣಕ್ಕಾಗಿ ಸಸಿ ನೆಡುವ ಕಾರ್ಯಕ್ರಮಗಳನ್ನು ಆಯೋಜಿಸಿದ್ದು ಪ್ರತಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ 1200 ಗಿಡಗಳನ್ನು ನೆಡಲು ಒಟ್ಟು 50,000 ಸಸಿಗಳನ್ನು ಅರಣ್ಯ ಇಲಾಖೆಯಿಂದ ಹಸ್ತಾಂತರಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭೂಮಿ ಉಳಿಸಿ ಆಂದೋಲನದ ಅಧ್ಯಕ್ಷ ಚ.ನಾ. ಅಶೋಕ್, ತಹಸಿಲ್ದಾರ್ ಜಿ.ಎಸ್. ಶಂಕರಪ್ಪ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜಿ. ಆರ್.ಹರೀಶ್, ಕ್ಷೇತ್ರ ಶಿಕ್ಷಣಾಧಿಕಾರಿ ಸತೀಶ್, ಪುರಸಭಾ ಮುಖ್ಯಾಧಿಕಾರಿ ಆರ್.ಯತೀಶ್ ಕುಮಾರ್, ಹಾಸನ ವೃತ್ತ ಅರಣ್ಯ ಸಂರಕ್ಷಣಾಧಿಕಾರಿ ಏಡುಕೊಂಡಲು, ಸಾಮಾಜಿಕ ಅರಣ್ಯ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿ ಸಹನ್, ಚನ್ನರಾಯಪಟ್ಟಣ ಉಪ ವಿಭಾಗ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಖಲಂದರ್, ಅರಸೀಕೆರೆ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ತೇಜಶ್ರೀ ಪುರುಷೋತ್ತಮ, ವಲಯ ಅರಣ್ಯಾಧಿಕಾರಿಗಳಾದ ಜ್ಯೋತಿ, ರಾಜಕುಮಾರ್ ಇತರರಿದ್ದರು.

# ಯುಜಿಡಿ ಕಾಮಗಾರಿಗೆ 130 ಕೋಟಿ ರೂ. ಅನುದಾನ ಅಗತ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮೂಲ ಸೌಕರ್ಯಗಳಲ್ಲಿ ಪ್ರಮುಖವಾದ ಕುಡಿಯುವ ನೀರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಪಟ್ಟಣದ ಯುಜಿಡಿ ವ್ಯವಸ್ಥೆಯನ್ನು ಸೂಕ್ತವಾಗಿ ನಿರ್ವಹಿಸಲು 130 ಕೋಟಿ ರೂ. ಅನುದಾನ ಅಗತ್ಯವಿರುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ಪಟ್ಟಣದ ನುಗ್ಗೇಹಳ್ಳಿ ಬಡಾವಣೆಯ ವಾರ್ಡ್ ನಂ.1 ರಲ್ಲಿ ನದಿ ಮೂಲದಿಂದ ಕುಡಿಯುವ ನೀರು ಕಲ್ಪಿಸುವ 25 ಲಕ್ಷ ರೂ. ವೆಚ್ಚದ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಕಾಮಗಾರಿಯನ್ನು ಮಹಾಲಿಂಗಪ್ಪ ಲೇಔಟ್‌ಗೂ ವಿಸ್ತರಿಸಲಾಗುವುದು ಎಂದರು.



94 ಸಿಸಿ ಅಡಿಯಲ್ಲಿ ಅರ್ಜಿ ಸಲ್ಲಿಸಿರುವ ಇಲ್ಲಿನ ಕುಟುಂಬಗಳಿಗೆ ಹಕ್ಕುಪತ್ರ ನೀಡುವ ಕಾರ್ಯಕ್ಕೆ ಈಗಾಗಲೇ ಚಾಲನೆ ನೀಡಲಾಗಿದೆ. ಒಂದಷ್ಟು ವ್ಯಾಪ್ತಿಯು ದಿಂಡಗೂರು ಹಾಗೂ ಜನಿವಾರ ಗ್ರಾಮ ಪಂಚಾಯಿತಿಗೆ ಸೇರಲಿದ್ದು ಕಾನೂನು ರೀತಿಯಲ್ಲಿ ಸಮಸ್ಯೆಗಳನ್ನು ಬಗೆಹರಿಸಿ ಅಧಿಕೃತವಾಗಿ ಹಕ್ಕುಪತ್ರ ವಿತರಿಸಲಾಗುವುದು ಎಂದು ಭರವಸೆ ನೀಡಿದರು.

ಪುರಸಭೆ ವ್ಯಾಪ್ತಿಗೆ ಸೇರಿರುವ ಹಿನ್ನೆಲೆಯಲ್ಲಿ ಯುಜಿಡಿ ವ್ಯವಸ್ಥೆಯನ್ನು ಸಹ ಮಹಾಲಿಂಗಪ್ಪ ಲೇಔಟ್ ಸೇರಿದಂತೆ ಇಲ್ಲಿನ ಬಡಾವಣೆಗೂ ವಿಸ್ತರಿಸಲು ಯೋಜನೆ ರೂಪಿಸಲಾಗಿದೆ. ಮುಂದಿನ ದಿನಗಳಲ್ಲಿ ಲಭ್ಯವಾಗುವ ಅನುದಾನ ಬಳಕೆ ಮಾಡಿಕೊಂಡು ಅಭಿವೃದ್ಧಿಗೊಳಿಸಲಾಗುವುದು ಎಂದರು.

ಇತ್ತೀಚೆಗೆ ಮನೆ ಗಣತಿ ಜರುಗಿದ್ದು ನಗರಸಭೆ ಅರಸೀಕೆರೆಯು 19,200 ಜನವಸತಿ ಹೊಂದಿದ್ದರೆ, ಪುರಸಭೆ ಚನ್ನರಾಯಪಟ್ಟಣವು 20,500 ಮನೆಗಳನ್ನು ಹೊಂದಿದೆ. ಆದ್ದರಿಂದ ಅಭಿವೃದ್ಧಿ ಹಾಗೂ ನಿರ್ವಹಣೆಗೆ ಹೆಚ್ಚಿನ ಅನುದಾನ ಅಗತ್ಯವಿದೆ ಎಂದು ತಿಳಿಸಿದರು.

ಪಟ್ಟಣದ ಯುಜಿಡಿ ವ್ಯವಸ್ಥೆಯನ್ನು ಸೂಕ್ತವಾಗಿ ನಿರ್ವಹಿಸಲು 130 ಕೋಟಿ ರೂ. ಅನುದಾನ ಅಗತ್ಯವಿರುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಶೇ.50 ರಷ್ಟು ಅನುದಾನ ನೀಡಿದರೆ ನಾಲ್ಕು ಭಾಗವಾಗಿ ವಿಂಗಡಿಸಿ ಹೈಟೆಕ್ ಮಾದರಿಯಲ್ಲಿ ಯುಜಿಡಿ ವ್ಯವಸ್ಥೆ ಮಾಡಿ ಸರ್ವತೋಮುಖ ಅಭಿವೃದ್ಧಿಗೊಳಿಸಲಾಗುವುದು ಎಂದರು.

ಸರ್ಕಾರದಿಂದ 15ನೇ ಹಣಕಾಸಿನ ಯೋಜನೆಯಡಿ ಪಟ್ಟಣದ ಅಭಿವೃದ್ಧಿಗೆ 1.50 ಕೋಟಿ ರೂ. ಅನುದಾನ ಲಭ್ಯವಾಗಲಿದ್ದು ಚರಂಡಿ ನಿರ್ಮಾಣಕ್ಕೆ ಕೇವಲ 75 ಲಕ್ಷ ರೂ. ಬಳಕೆ ಮಾಡಬಹುದು.

ಇದರಿಂದ ಪಟ್ಟಣವನ್ನು ಪರಿಪೂರ್ಣವಾಗಿ ಅಭಿವೃದ್ಧಿಗೊಳಿಸಲು ಸಾಧ್ಯವಿಲ್ಲ. ಆದರೆ ಪುರಸಭೆಯ ತೆರಿಗೆ ಹಣವು ಸೋರಿಕೆ ಆಗದಂತೆ ಕ್ರಮವಹಿಸಿ 3 ರಿಂದ 4 ವರ್ಷದಲ್ಲಿ ಒಟ್ಟು 15 ಕೋಟಿ ರೂ. ತೆರಿಗೆ ಹಣದಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಪಟ್ಟಣವನ್ನು ಅಭಿವೃದ್ಧಿಗೊಳಿಸಲಾಗಿದೆ ಎಂದರು.

ಪುರಸಭೆ ಮುಖ್ಯಾಧಿಕಾರಿ ಯತೀಶ್, ಪುರಸಭೆಯ ಮಾಜಿ ಅಧ್ಯಕ್ಷ ಸುರೇಶ್, ದಿಂಡಗೂರು ಸೊಸೈಟಿ ಮಾಜಿ ಅಧ್ಯಕ್ಷ ನಂಜುಂಡಪ್ಪ, ಪ್ರಮುಖರಾದ ಮಂಜಣ್ಣ, ರಾಜು, ಶಿವು ಮಂಜುನಾಥ್ ಹಾಗೂ ಇತರರು ಇದ್ದರು.

# ಜೂ.20 ರಿಂದ ಎಸ್‌ಐಆರ್: ಸಹಕಾರಕ್ಕೆ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಕಲಗೂಡು: ತಾಲ್ಲೂಕಿನಲ್ಲಿ ಚುನಾವಣಾ ಆಯೋಗದ ವತಿಯಿಂದ ಸಮಗ್ರ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕಾರ್ಯ ಜೂನ್ 20 ರಿಂದ ಜುಲೈ 20 ರವರೆಗೆ ಒಂದು ತಿಂಗಳು ನಡೆಯುತ್ತಿದ್ದು, ಸಾರ್ವಜನಿಕರು ಈ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸಹಕರಿಸುವಂತೆ ತಹಶೀಲ್ದಾರ್ ಕೆ.ಸಿ. ಸೌಮ್ಯ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಕುರಿತು ತಾಲ್ಲೂಕಿನಾದ್ಯಂತ ಎಲ್ಲ ಜನರಿಗೂ ಅರಿವು ಮೂಡಿಸುವ ಕಾರ್ಯ ವ್ಯಾಪಕವಾಗಿ ನಡೆಸಲಾಗುತ್ತಿದೆ. ಮತದಾರರು ವೋಟರ್ ಹೆಲ್ಪ್‌ಲೈನ್ ಮತ್ತು ಇಸಿಐ ನೆಟ್ ಆ್ಯಪ್‌ಗಳನ್ನು ಮೊಬೈಲ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ಮೂಲಕ ತಮ್ಮ ಬೂತ್ ಮತ್ತು ವಿಧಾನಸಭಾ ಕ್ಷೇತ್ರದ ನಿಖರ ಮಾಹಿತಿಯನ್ನು ಸುಲಭವಾಗಿ ವೀಕ್ಷಿಸಬಹುದು. ಹೆಚ್ಚಿನ ಸಂಖ್ಯೆಯಲ್ಲಿ ಜನರು ಈ ಪ್ರಕ್ರಿಯೆಯಲ್ಲಿ ಭಾಗವಹಿಸಿ, ತಮ್ಮ ನೋಂದಣಿಯನ್ನು ಖಾತ್ರಿಪಡಿಸಿಕೊಳ್ಳಬೇಕು ಎಂದರು.

ಮತದಾರರ ಪಟ್ಟಿ ಪರಿಷ್ಕರಣೆಗಾಗಿ ಬೂತ್ ಮಟ್ಟದ ಅಧಿಕಾರಿಗಳು ಮನೆ, ಮನೆಗೆ ಭೇಟಿ ನೀಡಲಿದ್ದು, ಆ ಸಂದರ್ಭದಲ್ಲಿ ಸಾರ್ವಜನಿಕರು ಅಗತ್ಯ ಮಾಹಿತಿ ಹಾಗೂ ದಾಖಲಾತಿಗಳನ್ನು ನೀಡಿ ಸ್ಪಂದಿಸಬೇಕು. ಅಧಿಕಾರಿಗಳು ತರುವ ಫಾರ್ಮ್‌ನಲ್ಲಿ ಇತ್ತೀಚಿನ ಭಾವಚಿತ್ರವನ್ನು ಲಗತ್ತಿಸಿ, ನಿಖರ ವಿವರಗಳನ್ನು ಭರ್ತಿ ಮಾಡಲು ಸಹಕರಿಸಬೇಕು. ಮನೆಗೆ ಬೀಗ ಹಾಕಿದ್ದರೆ ಅಥವಾ ಬೇರೆ ಕಡೆಗೆ ಸ್ಥಳಾಂತರಗೊಂಡಿದ್ದರೆ, ಬಿಎಲ್ ಒಗಳು ಕನಿಷ್ಠ ಮೂರು ಬಾರಿ ಭೇಟಿ ನೀಡಲಿದ್ದಾರೆ. ಮೂರು ಭೇಟಿಯ ನಂತರವೂ ವ್ಯಕ್ತಿಗಳು ಲಭ್ಯವಾಗದಿದ್ದರೆ, ಚುನಾವಣಾ ಆಯೋಗದಿಂದ ನೋಟಿಸ್ ಜಾರಿ ಮಾಡಲಾಗುತ್ತದೆ. ಆ ಬಳಿಕ ಪಟ್ಟಿಯಲ್ಲಿ ಅವರ ಹೆಸರನ್ನು ಉಳಿಸಬೇಕೇ ಅಥವಾ ಕೈಬಿಡಬೇಕೇ ಎಂಬುದನ್ನು ನಿರ್ಧರಿಸಲಾಗುತ್ತದೆ. ನಿಯಮಗಳ ಪ್ರಕಾರ, ಒಬ್ಬ ಮತದಾರನ ಹೆಸರು ಕೇವಲ ಒಂದು ಬೂತ್‌ನಲ್ಲಿ ಮಾತ್ರ ಇರಲು ಅವಕಾಶವಿರುತ್ತದೆ.

ಗ್ರಾಮೀಣ ಭಾಗದ ಜನರ ಅನುಕೂಲಕ್ಕಾಗಿ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲೂ ಮತದಾರರ ಸೌಲಭ್ಯ ಕೇಂದ್ರಗಳನ್ನು ತೆರೆಯಲಾಗಿದ್ದು, ನಿಗದಿತ ಸಮಯದಲ್ಲಿ ಜನರು ಭೇಟಿ ನೀಡಬಹುದಾಗಿದೆ.

ಈ ಕಾರ್ಯಕ್ರಮದ ಯಶಸ್ಸಿಗಾಗಿ ಬಿಎಲ್ ಒಗಳಿಗೆ ಈಗಾಗಲೇ ತರಬೇತಿ ನೀಡಲಾಗುತ್ತಿದ್ದು, ದೊಡ್ಡಮಗ್ಗೆ, ಕಸಬಾ, ರಾಮನಾಥಪುರ ಮತ್ತು ಕೊಣನೂರು ಹೋಬಳಿಗಳಲ್ಲಿ ತರಬೇತಿ ಕಾರ್ಯ ಮುಗಿದಿದೆ ಮಲ್ಲಿಪಟ್ಟಣ ಹೋಬಳಿಯಲ್ಲಿ ತರಬೇತಿ ಕಾರ್ಯ ನಡೆಯಬೇಕಿದೆ. ಪರಿಷ್ಕರಣೆ ಕಾರ್ಯದಲ್ಲಿ 283 ಬಿಎಲ್ ಒಗಳು 39 ಮಂದಿ ಸೂಪರ್ ವೈಸರ್‌ಗಳು ಕಾರ್ಯ ನಿರ್ವಹಿಸಲಿದ್ದು ತಾಪಂ ಇಒ ನೋಡಲ್ ಅಧಿಕಾರಿಯಾಗಿರುತ್ತಾರೆ. ಚುನಾವಣಾ ಆಯೋಗದ ಸೂಚನೆಯಂತೆ ಪ್ರತಿ ರಾಜಕೀಯ ಪಕ್ಷಗಳಿಂದ ಬೂತ್ ಮಟ್ಟದ ಏಜೆಂಟ್ಗಳನ್ನು ನೇಮಕ ಮಾಡಲು ಸೂಚಿಸಲಾಗಿದೆ. ಕಾಂಗ್ರೆಸ್ ಪಕ್ಷವು ಈಗಾಗಲೇ ತನ್ನ ಏಜೆಂಟರ ಪಟ್ಟಿಯನ್ನು ಸಲ್ಲಿಸಿದೆ. ಉಳಿದ ಇತರ ಪಕ್ಷಗಳೂ ತಮ್ಮ ಏಜೆಂಟರ ಪಟ್ಟಿಯನ್ನು ಶೀಘ್ರವಾಗಿ ನೀಡುವಂತೆ ಕೋರಲಾಗಿದ್ದು, ಮಾಹಿತಿಯಲ್ಲಿನ ಲೋಪದೋಷಗಳನ್ನು ಸರಿಪಡಿಸಲು ಹಾಗೂ ಪರಿಷ್ಕರಣಾ ಕಾರ್ಯದಲ್ಲಿ ಸಹಕರಿಸಲು ಅವರಿಗೂ ಸೂಕ್ತ ತರಬೇತಿಯನ್ನು ನೀಡಲಾಗುವುದು ಎಂದರು.

ಮತದಾನ ನೋಂದಣಾಧಿಕಾರಿ ರುದ್ರಮುನಿ ಹಾಜರಿದ್ದರು.

# ಸ್ವಚ್ಛತೆಗೆ ಸಹಕರಿಸದಿದ್ದರೆ ದಂಡ–ಸೌಲಭ್ಯ ಬಂದ್



ಆಲೂರು: ಸಾರ್ವಜನಿಕರು, ಉದ್ದಿಮೆದಾರರು ಸ್ವಚ್ಛತೆಗೆ ಸಹಕರಿಸದಿದ್ದರೆ ದಂಡದ ಜೊತೆಗೆ ಸೌಲಭ್ಯಗಳ ಕೊರತೆ ಎದುರಿಸಬೇಕಾಗುತ್ತದೆ ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್ ಎಚ್ಚರಿಕೆ ನೀಡಿದ್ದಾರೆ.

ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಕಲ್ಯಾಣ ಮಂಟಪ, ಬಾರ್, ಹೋಟೆಲ್, ಬ್ರೆಡ್ ಅಂಗಡಿ ಉದ್ದಿಮೆ ಮಾಲೀಕರ ಸಭೆ ಉದ್ದೇಶಿಸಿ ಮಾತನಾಡಿ, ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಹೊಸ ಘನತ್ಯಾಜ್ಯ ನಿಯಮಗಳನ್ನು ರೂಪಿಸಲಾಗಿದೆ. ಪ್ರತಿಯೊಬ್ಬರೂ ತಮ್ಮ ಉದ್ದಿಮೆಗಳಲ್ಲಿ ಸಂಗ್ರಹವಾಗುವ ಕಸವನ್ನು ಹಸಿ ತ್ಯಾಜ್ಯ, ಒಣ ತ್ಯಾಜ್ಯ, ಸ್ಯಾನಿಟರಿ ತ್ಯಾಜ್ಯ ಮತ್ತು ವಿಶೇಷ ಕಾಳಜಿ ತ್ಯಾಜ್ಯವೆಂದು ವಿಂಗಡಿಸಿ ಬೇರ್ಪಡಿಸಿ ಕಸದ ವಾಹನಗಳಿಗೆ ನೀಡಬೇಕು. ಬೇರ್ಪಡಿಸದೆ ನೀಡುವ ಕಸವನ್ನು ಸ್ವೀಕರಿಸುವುದಿಲ್ಲ.

ತರಕಾರಿ ಅಂಗಡಿ, ಶಾಲೆಗಳಿಗೆ ಕಸ ಸಂಗ್ರಹ ಡಬ್ಬಿಗಳನ್ನು ನೀಡಲಾಗಿದೆ. ತ್ಯಾಜ್ಯವನ್ನು ಎಲ್ಲೆಂದರಲ್ಲಿ ಬಿಸಾಡಿದ ಮತ್ತು ನಿಯಮ ಉಲ್ಲಂಘಿಸಿದ ವ್ಯಕ್ತಿ/ಕುಟುಂಬದ ವಿವರವನ್ನು ತಾಂತ್ರೀಕರಣದಲ್ಲಿ ಅಪಲೋಡ್ ಮಾಡಲಾಗುವುದು. ಆಗ ದಂಡ ಪಾವತಿಗೆ ತಯಾರಾಗಿರಬೇಕು. ಪ್ರತಿಯೊಂದು ವಿಭಾಗದಲ್ಲಿ ತಾಂತ್ರೀಕರಣ ಹೊಂದಿಕೊಂಡಿರುವುದರಿಂದ ಸ್ವಚ್ಛತೆಗೆ ಎಲ್ಲರೂ ಸಹಕರಿಸಬೇಕು.

ನಿಯಮಗಳನ್ನು ಉಲ್ಲಂಗಿಸಿದರೆ ಪ್ರಥಮ ಹಂತದಲ್ಲಿ ತಿಳಿವಳಿಕೆ ನೋಟಿಸ್ ನೀಡಲಾಗುತ್ತದೆ. ಎರಡನೆ ಹಂತದಲ್ಲಿ ಉದ್ದಿಮೆಗೆ ನೀರು ಸರಬರಾಜು ನಿಲ್ಲಿಸಲಾಗುವುದು, ಮೂರನೆ ಹಂತದಲ್ಲಿ ವಿದ್ಯುತ್ ಸೌಲಭ್ಯ ನಿಲ್ಲಿಸಲಾಗುವುದು. ಮರು ಸೌಲಭ್ಯ ಪಡೆಯುವ ಸಂದರ್ಭದಲ್ಲಿ ತಾಂದಂಡವನ್ನು ಕಡ್ಡಾಯವಾಗಿ ಪಾವತಿ ಮಾಡಬೇಕಾಗುತ್ತದೆ.

ಪ್ರತಿಯೊಂದು ಅಂಗಡಿ, ಉದ್ದಿಮೆಗಳನ್ನು ಈಗಾಗಲೆ ತಾಂತ್ರೀಕರಣದ ಮೂಲಕ ನೊಂದಣಿ ಮಾಡಲಾಗಿದೆ. ಪ್ರತಿ ದಿನದ ಚಟುವಟಿಕೆಯನ್ನು ಇದರಲ್ಲಿ ನೊಂದಾವಣಿ ಮಾಡಲಾಗುವುದು. ಉದ್ದಿಮೆ ಮಾಲೀಕರು ತಮ್ಮ ಉದ್ದಿಮೆ ವ್ಯಾಪ್ತಿ ಪರಿಸರದ ಸ್ವಚ್ಛತೆ ಕಾಪಾಡುವುದು ತಮ್ಮ ಕರ್ತವ್ಯವಾಗಬೇಕು. ಪಟ್ಟಣ ಪಂಚಾಯಿತಿ ಸುಂದರವಾಗಿಡಲು ಪ್ರತಿಯೊಬ್ಬರೂ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದರು.

ಸಭೆಯಲ್ಲಿ ಉದ್ದಿಮೆ ಮಾಲೀಕರು, ಪುರಸಭೆ ಸಿಬ್ಬಂದಿ, ಪೌರ ಕಾರ್ಮಿಕರು ಉಪಸ್ಥಿತರಿದ್ದರು.

# ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಗ್ಯಾರಂಟಿ ಅಧ್ಯಕ್ಷರಿಂದ ಸಂಭ್ರಮಾಚರಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ. ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸುವ ಮೂಲಕ ರಾಜ್ಯದ ಸಮಗ್ರ ಅಭಿವೃದ್ಧಿಗೆ ಶ್ರಮಸಲಿದ್ದಾರೆ ಎಂದು ತಾಲೂಕು ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಎಲ್.ಪಿ.ಪ್ರಕಾಶ್‌ಗೌಡ ತಿಳಿಸಿದರು.

ವಕೀಲರ ಸಂಘದಲ್ಲಿ ತಾಲೂಕು ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಹಾಗೂ ವಕೀಲರಾಗಿರುವ ಎಲ್.ಪಿ.ಪ್ರಕಾಶ್‌ಗೌಡ ಅವರು, ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆ ಸಿಹಿ ಹಂಚಿ ಸಂಭ್ರಮಾಚರಣೆ ಆಚರಿಸಿದರು. ಕಾಂಗ್ರೆಸ್ ಪಕ್ಷದ ಶಿಸ್ತಿನ ಸಿಪಾಯಿಗಳಾಗಿ ವಿದ್ಯಾರ್ಥಿ ದೆಸೆಯಿಂದಲೂ ಪಕ್ಷದ ಸಂಘಟನೆಗೆ ದಶಕಗಳಿಂದ ಹೆಚ್ಚಿನ ಒತ್ತು ನೀಡುತ್ತಾ ಬಂದಿದ್ದು, ಅನೇಕ ಬಾರಿ ಶಾಸಕರಾಗಿ ಪಕ್ಷದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಅವರು 2013ರ ವಿಧಾನಸಭಾ ಚುನಾವಣೆಯಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆಯಾಗಿ ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಯಶಸ್ವಿಯಾಗಿದ್ದರು.

ಅವರ ಪಕ್ಷ ನಿಷ್ಠೆ ಅಭಿವೃದ್ಧಿಯ ಚಿಂತನೆಗೆ ಅನುಗುಣವಾಗಿ ಪಕ್ಷ ಮುಖ್ಯಮಂತ್ರಿ ಹುದ್ದೆ ನೀಡಿದೆ. ಅವರ ನೇತೃತ್ವದ ರಾಜ್ಯ ಸರ್ಕಾರ ರಾಜ್ಯದ ಮತದಾರರಿಗೆ ಕೊಟ್ಟ ಮಾತಿನಂತೆ ರಾಜ್ಯದ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಿದೆ. ಮಾಜಿ ಮುಖ್ಯಮಂತ್ರಿ ಒಕ್ಕಲಿಗರ ನಾಯಕ ಎಸ್.ಎಂ.ಕೃಷ್ಣ ಅವರ ನಂತರ ಮತ್ತೊಬ್ಬ ಒಕ್ಕಲಿಗ ನಾಯಕರಾದ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಸ್ಥಾನ ಅಲಂಕರಿಸಿದ್ದಾರೆ. ಕಾಂಗ್ರೆಸ್ ಪಕ್ಷ ಎಲ್ಲಾ ವರ್ಗದ ಜನರಿಗೆ ಸಾಮೂಹಿಕ ನಾಯಕತ್ವದಲ್ಲಿ ಅಧಿಕಾರ ಹಂಚಿಕೆ ಮಾಡುವ ಮೂಲಕ ಎಲ್ಲರಿಗೂ ನ್ಯಾಯ ಒದಗಿಸಿದೆ ಎಂದರು.

ಗ್ಯಾರಂಟಿ ಯೋಜನೆಗಳು ಎಂದಿನಂತೆ ಮುಂದುವರೆಯಲಿದ್ದು ಫಲಾನುಭವಿಗಳಿಗೆ ಸೌಲಭ್ಯ ಮುಂದುವರಿಯಲಿದೆ ಎಂದರು. ಈ ವೇಳೆ ಹಿರಿಯ ವಕೀಲರಾದ ಸಿಎಸ್ ದೇವರಾಜೇಗೌಡ ನೂತನ ಮುಖ್ಯಮಂತ್ರಿಗಳಿಗೆ ಶುಭಕೋರಿ ಮಾತನಾಡಿದರು.

ವಕೀಲರ ಸಂಘದ ಅಧ್ಯಕ್ಷ ಡಿ.ಕೆ. ಹರೀಶ್, ಉಪಾಧ್ಯಕ್ಷ ದಿನೇಶ್, ಕಾರ್ಯದರ್ಶಿ ಸಿಬಿ ಹೇಮಂತ್‌ಕುಮಾರ್, ಖಜಾಂಚಿ ಚೇತನ್‌ಕುಮಾರ್, ಮಹಿಳಾ ಜಂಟಿ ಕಾರ್ಯದರ್ಶಿ ಸುಷ್ಮಾ ಜೈಪಾಲ್, ವಕೀಲರಾದ ಎಂ.ಬಿ. ರಂಗಶೆಟ್ಟಿ, ಎಂ.ಎನ್.ಬೋರೇಗೌಡ, ಟಿ.ಎಸ್. ಪ್ರಕಾಶ್, ಬಿ.ಸಿ. ಮುರುಳಿಧರ್, ದೇವರಾಜ್‌ಕುಮಾರ್, ಬಿ.ವಿ. ವಿಜಯ್, ಡಿ.ಸಿ. ರಮೇಶ್, ಅರಳಾಪುರ ಕುಮಾರ್, ಕರಿಕ್ಯಾತನಹಳ್ಳಿ ಕಾಂತರಾಜ್, ಜೆಎಸ್ ಅಶ್ವಥ್ ಇದ್ದರು.

# ಉತ್ತಮ ಭವಿಷ್ಯಕ್ಕಾಗಿ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದೊಂದಿಗೆ ವಿವಿಧ ಸೌಲಭ್ಯಗಳು ಲಭ್ಯವಿದ್ದು, ಗ್ರಾಮೀಣ ಭಾಗದ ಪೋಷಕರು ತಮ್ಮ ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಮಾಡಿಸಿ ಈ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಹನುಮೇಗೌಡ ಕರೆ ನೀಡಿದರು.

ಶಾಂತಿಗ್ರಾಮದ ಕೆಪಿಎಸ್ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಶಾಲಾ ಪ್ರಾರಂಭೋತ್ಸವ ಹಾಗೂ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ ಮತ್ತು ಸಮವಸ್ತ್ರ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶಾಂತಿಗ್ರಾಮ ಕೆ.ಪಿ.ಎಸ್. ಪ್ರೌಢಶಾಲೆಯಲ್ಲಿ ಅನುಭವಿ ಬೋಧಕ ವರ್ಗದಿಂದ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ಶಾಲೆಯು ಅಭೂತಪೂರ್ವ ಫಲಿತಾಂಶ ದಾಖಲಿಸಿದೆ. ತಾಲ್ಲೂಕಿನ ಉತ್ತಮ ಶಾಲೆಗಳ ಪೈಕಿ ಈ ಶಾಲೆಯು ಒಂದಾಗಿದೆ ಎಂದು ಅವರು ತಿಳಿಸಿದರು. ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ, ವಿದ್ಯಾರ್ಥಿಗಳ ಹಾಜರಾತಿ, ಮೂಲಸೌಕರ್ಯಗಳ ಅಭಿವೃದ್ಧಿ, ಕ್ರೀಡೆ ಹಾಗೂ ಪಠ್ಯೇತರ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಪ್ರತಿಯೊಬ್ಬ ವಿದ್ಯಾರ್ಥಿಯ ಕಲಿಕಾ ಮಟ್ಟವನ್ನು ಗುರುತಿಸಿ ಸೂಕ್ತ ಮಾರ್ಗದರ್ಶನ ನೀಡುವ ಮೂಲಕ ಉತ್ತಮ ಫಲಿತಾಂಶ ಸಾಧಿಸಲು ಶಿಕ್ಷಕರು ಶ್ರಮಿಸಬೇಕು ಎಂದು ಹೇಳಿದರು.

ಶಾಂತಿಗ್ರಾಮ ಹಳೆಯ ವಿದ್ಯಾರ್ಥಿಗಳ ಸಂಘದ ಕಾರ್ಯದರ್ಶಿ ಎಲ್. ರಂಗಪ್ಪ ಮಾತನಾಡಿ, ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ವ್ಯವಸ್ಥೆ ಇದ್ದು, ಪೋಷಕರು ತಮ್ಮ ಮಕ್ಕಳನ್ನು ನಿಯಮಿತವಾಗಿ ಶಾಲೆಗೆ ಕಳುಹಿಸಬೇಕು ಎಂದು ಮನವಿ ಮಾಡಿದರು. ಶಾಲಾ ಆರಂಭದ ದಿನವೇ ಉತ್ತಮ ಹಾಜರಾತಿ ದಾಖಲಾಗಿರುವುದನ್ನು ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರೌಢಶಾಲೆಯ ಮುಖ್ಯೋಪಾಧ್ಯಾಯಿನಿ ಆರ್. ತನುಜ ಮಾತನಾಡಿ, ಶಾಲೆಯ ವಿದ್ಯಾರ್ಥಿಗಳು ರಾಷ್ಟ್ರ ಹಾಗೂ ರಾಜ್ಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಶಾಲೆಗೆ ಕೀರ್ತಿ ತಂದಿರುವುದನ್ನು ವಿವರಿಸಿದರು. ಉತ್ತಮ ಕಲಿಕೆ ಉಜ್ವಲ ಭವಿಷ್ಯಟಿಟ ಎಂಬ ಧ್ಯೇಯದೊಂದಿಗೆ ವಿದ್ಯಾರ್ಥಿಗಳು ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ಪುಸ್ತಕಗಳತ್ತ ಹೆಚ್ಚಿನ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಸಮಾಜ ವಿಜ್ಞಾನ ಶಿಕ್ಷಕಿ ರೂಪಾದೇವಿ ಮಾತನಾಡಿ, ಶಾಲೆಯಲ್ಲಿ ಕನ್ನಡ ಹಾಗೂ ಇಂಗ್ಲಿಷ್ ಎರಡೂ ಮಾಧ್ಯಮಗಳಲ್ಲಿ ಶಿಕ್ಷಣ ವ್ಯವಸ್ಥೆ ಲಭ್ಯವಿದ್ದು, ಕಲಿಕೆಗೆ ಪೂರಕವಾಗಿ ಕಂಪ್ಯೂಟರ್ ಸೌಲಭ್ಯವೂ ಒದಗಿಸಲಾಗಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡಿರುವ ಉಚಿತ ಪಠ್ಯ ಪುಸ್ತಕಗಳನ್ನು ಹಾಗೂ ಸಮವಸ್ತ್ರಗಳನ್ನು ವಿತರಿಸಲಾಯಿತು. ಸಹ ಶಿಕ್ಷಕ ಲೋಕೇಶ್ ಸ್ವಾಗತಿಸಿದರು. ಸವಿತಾಬಾಯಿ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಸಹ ಶಿಕ್ಷಕಿ ಸಂಧ್ಯಾರಾಣಿ ವಂದಿಸಿದರು.

# ಪ್ರಮಾಣ ಪತ್ರ

ಹಾಸನ ಜಿಲ್ಲೆ, ಹಾಸನ ನಗರ, ಹೇಮಾವತಿ ನಗರ, 1ನೇ ಮುಖ್ಯ 2ನೇ ಕ್ರಾಸ್, 8ಇ 1906 ರಲ್ಲಿ ವಾಸವಾಗಿರುವ ಜಿ.ಎಸ್. ನಂಜುಂಡೇಗೌಡ ರವರ ಮಗನಾದ ಸುಮಾರು 53 ವರ್ಷ ವಯಸ್ಸಿನ ಎನ್. ಹರೀಶ್ (N HARISH) ಆದ ನಾನು ಪ್ರಮಾಣ ಮಾಡಿ ಹೇಳುವುದೇನೆಂದರೆ:-

ಆದಾಗಿ ನಾನು ಮೇಲ್ಕಂಡ ವಿಳಾಸದಲ್ಲಿ ವಾಸವಾಗಿರುತ್ತೇನೆ.

ಆದಾಗಿ ನನ್ನ ಹೆಸರು ಎನ್. ಹರೀಶ (N HARISH) ಎಂಬುದಾಗಿದ್ದು, ಈಗ ನಾನು ನನ್ನ ಹೆಸರನ್ನು ಎನ್. ಹರೀಶ್ (N HARISH) ಎಂಬುದಾಗಿ ಬದಲಾಯಿಸಿಕೊಂಡಿರುತ್ತೇನೆಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ.

ಈ ಬಗ್ಗೆ ಮುಂದೆ ಯಾವುದೇ ತಂಟೆ ತಕರಾರುಗಳು ಬಂದಲ್ಲಿ ಅವುಗಳನ್ನು ನಾನೇ ಖುದ್ದು ನಿಂತು ಬಗೆಹರಿಸಿಕೊಡಲು ಒಪ್ಪಿ ಬದ್ಧನಾಗಿರುತ್ತೇನೆ.

ಮೇಲ್ಕಂಡ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆಂದು ಈ ಮೂಲಕ ಪ್ರಮಾಣ ಮಾಡಿ ಹೇಳುತ್ತೇನೆ.

**ಸ್ಥಳ :** ಹಾಸನ

**ದಿನಾಂಕ :** 04/06/2026

ಪ್ರಮಾಣದಾರರು

# ಇತಿಹಾಸದಲ್ಲಿ ಈ ದಿನ

## ಜೂನ್-06

1944: ದ್ವಿತೀಯ ವಿಶ್ವಯುದ್ಧದ ಮಹತ್ವದ ಘಟ್ಟವಾದ ಡಿ-ಡೇ ಕಾರ್ಯಾಚರಣೆ ಆರಂಭವಾಯಿತು. ಮಿತ್ರರಾಷ್ಟ್ರಗಳ ಸೈನಿಕರು ಫ್ರಾನ್ಸ್‌ನ ನಾರ್ಮಂಡಿ ಕರಾವಳಿಯಲ್ಲಿ ಇಳಿದು ನಾಜಿ ಜರ್ಮನಿಯ ವಿರುದ್ಧದ ಹೋರಾಟಕ್ಕೆ ಹೊಸ ತಿರುವು ನೀಡಿದರು.

1946: ವಿಶ್ವದ ಪ್ರಸಿದ್ಧ ಬ್ಯಾಸ್ಕೆಟ್‌ಬಾಲ್ ಸಂಸ್ಥೆಯಾದ ಎನ್‌ಬಿಎ ಸ್ಥಾಪನೆಯಾಯಿತು.

1984: ವಿಶ್ವದ ಜನಪ್ರಿಯ ವಿಡಿಯೊ ಆಟಗಳಲ್ಲೊಂದಾದ ಟೆಟ್ರಿಸ್ ಮೊದಲ ಬಾರಿಗೆ ಬಿಡುಗಡೆಗೊಂಡಿತು.

1933: ಅಮೆರಿಕದಲ್ಲಿ ವಿಶ್ವದ ಮೊದಲ ಡ್ರೈವ್-ಇನ್ ಚಿತ್ರಮಂದಿರ ಆರಂಭವಾಯಿತು.

1912: ಅಲಾಸ್ಕಾದ ನೊವಾರುಪ್ಟಾ ಜ್ವಾಲಾಮುಖಿ ಸ್ಫೋಟ ಆರಂಭವಾಗಿ, 20ನೇ ಶತಮಾನದ ಅತಿದೊಡ್ಡ ಜ್ವಾಲಾಮುಖಿ ಸ್ಫೋಟಗಳಲ್ಲಿ ಒಂದೆಂದು ದಾಖಲಾಯಿತು.

# ಗಾಬರಿಗೊಂಡು ಜನರ ಮೇಲೆ ಚಿರತೆ ದಾಳಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹೊಳೆನರಸೀಪುರ: ತಾಲೂಕಿನ ಅಂಕವಳ್ಳಿ ಗ್ರಾಮದಲ್ಲಿ ಜಮೀನಲ್ಲಿ ಕೆಲಸ ಮಾಡುತ್ತಿದ್ದ ರೈತರು ಹಾಗೂ ಮಹಿಳೆಯರ ಮೇಲೆ ಚಿರತೆ ದಾಳಿ ಮಾಡಿ ಗಂಭೀರ ಗಾಯಗೊಳಿಸಿದೆ.

ಒಂದೆಡೆ ನಾಲ್ವರು ಗಾಯಗೊಂಡಿದ್ದರೆ, ಮತ್ತೊಂದೆಡೆ ಮಹಿಳೆಗೆ ಕಚ್ಚಿದ ಹಾಗೂ ಪರಚಿದ ಗಾಯಗಳಾಗಿವೆ. ಬೆಳಿಗ್ಗೆ ಜಮೀನಿನಲ್ಲಿ ಕೆಲಸಕ್ಕೆ ತೆರಳಿದ್ದ ವೇಳೆ ಏಕಾಏಕಿ ಚಿರತೆ

ದಾಳಿ ಮಾಡಿದ್ದು, ಗ್ರಾಮದ ರೈತ ನವೀನ್(40), ನಾಗರಾಜ್(55) ಮತ್ತು ಜಯಮ್ಮ(70) ಎಂಬುವರು ಗಂಭೀರ ಗಾಯಗೊಂಡಿದ್ದಾರೆ. ಸದ್ಯ ಗಾಯಾಳು ರೈತರು ಹಾಗೂ ಮಹಿಳೆಯರಿಗೆ ಪಟ್ಟಣದ ತಾಲೂಕು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಪರಿಸ್ಥಿತಿ ಗಂಭೀರವಾಗಿರುವವರನ್ನು ಹಾಸನದ ಹಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಅಂಕವಳ್ಳಿಯಲ್ಲಿ ನಾಲ್ವರ ಮೇಲೆ ದಾಳಿ ನಡೆಸಿದ ಬಳಿಕ ಸಮೀಪದ ಬೂವನಹಳ್ಳಿ ಕಡೆಗೆ ಓಡಿದ ಚಿರತೆ, ಅಲ್ಲಿದ್ದ ವಸಂತಮ್ಮ ಎಂಬುವರ ಮೇಲೂ ದಾಳಿ ಮಾಡಿ ಗಾಯ ಮಾಡಿದೆ.

ಕೂಡಲೇ ಮಹಿಳೆ ಕೂಗಾಡಿದ್ದರಿಂದ ಗಾಬರಿಗೊಂಡ ಚಿರತೆ ದನದ ಕೊಟ್ಟಿಗೆ ಸೇರಿಕೊಂಡಿದೆ. ಯಾವಾಗ ಚಿರತೆ ಬೂವನಹಳ್ಳಿ ಗ್ರಾಮದ ಯೋಗೇಶ್ ಎಂಬುವವರ ಕೊಟ್ಟಿಗೆ ಒಳಗೆ ಹೋಯಿತೋ, ಕೂಡಲೇ ಎಚ್ಚೆತ್ತ ಗ್ರಾಮಸ್ಥರು ಕೊಟ್ಟಿಗೆ ಬಾಗಿಲು ಮುಚ್ಚಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಸುದ್ದಿ ತಿಳಿಸಿದರು.

ಸತತ ಆರು ಗಂಟೆಗಳ ಕಾರ್ಯಾಚರಣೆ ಬಳಿಕ ಚಿರತೆಯನ್ನು ಸೆರೆ ಹಿಡಿಯಲಾಯಿತು. ಗ್ರಾಮದಲ್ಲಿ ಹಲವು ದಿನಗಳಿಂದ ಚಿರತೆ ಇರುವ ಬಗ್ಗೆ ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದರೂ, ಅವರು ನಿರ್ಲಕ್ಷ್ಯ ವಹಿಸಿದ್ದೇ ಇವತ್ತಿನ ಅವಾಂತರಕ್ಕೆ ಕಾರಣ ಎಂಬ ಆರೋಪ ಕೇಳಿ ಬಂದಿದೆ. ಈ ಘಟನೆಯಿಂದ ರೈತರು ಜಮೀನು ಕೆಲಸಕ್ಕೆ ತೆರಳಲು ಭಯ ಪಡುತ್ತಿದ್ದಾರೆ. ಈ ಸಂಬಂಧ ಹೊಳೆನರಸೀಪುರ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸುದ್ದಿ ತಿಳಿದ ಕೂಡಲೇ ಸಂಸದ ಶ್ರೇಯಸ್ ಪಟೇಲ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಪರಿಶೀಲಿಸಿ, ಗಾಯಾಳುಗಳ ಆರೋಗ್ಯ ವಿಚಾರಿಸಿ ಧೈರ್ಯ ಹೇಳಿದರು.

ಹೆಣ್ಣು ಚಿರತೆ ಸೆರೆ: ಸುದ್ದಿ ತಿಳಿದ ಕೂಡಲೇ ಸ್ಥಳಕ್ಕೆ ದೌಡಾಯಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ, ಗ್ರಾಮಾಂತರ ಠಾಣೆ ಪೊಲೀಸರು, ಮೈಸೂರಿನ ವನ್ಯಜೀವಿ ವೈದ್ಯ ಡಾ.ಆದರ್ಶ ನೇತೃತ್ವದಲ್ಲಿ ಕೆಲವೇ ಗಂಟೆಗಳಲ್ಲಿ ಸುರಕ್ಷಿತವಾಗಿ ದಾಳಿಕೋರ ಚಿರತೆಗೆ ಅರವಳಿಕೆ ಚುಚ್ಚುಮದ್ದು ನೀಡಿ ಕಾರ್ಯಾಚರಣೆ ನಡೆಸಿ ಚಿರತೆಯನ್ನು ಸೆರೆ ಹಿಡಿಯುವಲ್ಲಿ ಯಶಸ್ವಿಯಾದರು.

# ಪರಿಸರ ಅರಿವು ಮೂಡಿಸಲು ಸ್ಕಾಲರ್ಸ್ ಶಾಲಾ ಮಕ್ಕಳ ಪ್ರವಾಸ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ನಗರದ ಸ್ಕಾಲರ್ಸ್ ಇಂಟರ್ ನ್ಯಾಷನಲ್ ಶಾಲೆಯಲ್ಲಿ ವಿಶ್ವ ಪರಿಸರ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಪ್ರಸ್ತುತ ದಿನಗಳಲ್ಲಿ ಪರಿಸರ ಮಾಲಿನ್ಯ, ಅರಣ್ಯ ನಾಶ, ಪ್ಲಾಸ್ಟಿಕ್ ಬಳಕೆಯ ಹೆಚ್ಚಳದಿಂದ ಪ್ರಕೃತಿ ಮೇಲೆ ಉಂಟಾಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಮಕ್ಕಳಿಗೆ ತಿಳುವಳಿಕೆ ನೀಡಲಾಯಿತು. ವಿದ್ಯಾರ್ಥಿಗಳನ್ನು ಪ್ರಕೃತಿಯ ಮಡಿಲಲ್ಲಿರುವ ರಮಣೀಯ, ಐತಿಹಾಸಿಕ ಹಾಗೂ ಪ್ರೇಕ್ಷಣೀಯ ಸ್ಥಳಕ್ಕೆ ಕರೆದುಕೊಂಡು ಹೋಗಿ ಪ್ರಾತ್ಯಕ್ಷಿಕೆ ಮೂಲಕ ಪ್ರಕೃತಿಯ ಮಹತ್ವ ಹೇಳಿಕೊಡಲಾಯಿತು. ಶಿಕ್ಷಕರು ವಿದ್ಯಾರ್ಥಿಗಳಿಗೆ ಗಿಡಮರಗಳನ್ನು ನೆಡುವುದರಿಂದ ಮಾನವ ಜೀವನಕ್ಕೆ ಆಗುವ ಪ್ರಯೋಜನಗಳ ಬಗ್ಗೆ ವಿವರಿಸಿದರು. ಮರಗಳು ಮಳೆಯಾಗಲು ಸಹಕಾರಿ, ಶುದ್ಧವಾದ ಗಾಳಿಯನ್ನು ನೀಡುತ್ತವೆ, ಪರಿಸರ ಸಮತೋಲನವನ್ನು ಕಾಪಾಡುವವು ಎಂಬುದನ್ನು ತಿಳಿಸಲಾಯಿತು. ಜೊತೆಗೆ ಪ್ಲಾಸ್ಟಿಕ್ ಬಳಕೆಯಿಂದ ಭೂಮಿ, ನೀರು ಮತ್ತು ಪ್ರಾಣಿಗಳಿಗೆ ಆಗುವ ಹಾನಿ ಕುರಿತು ಜಾಗೃತಿ ಮೂಡಿಸಲಾಯಿತು. ಅರಣ್ಯ ನಾಶದಿಂದ ಉಂಟಾಗುವ ಜಲಕಷ್ಟ, ವಾಯುಮಾಲಿನ್ಯ, ತಾಪಮಾನ ಏರಿಕೆ ಮತ್ತು ಪರಿಸರ ಅಸಮತೋಲನದಂತಹ ಸಮಸ್ಯೆಗಳ ಬಗ್ಗೆ ಮಕ್ಕಳಿಗೆ ಉದಾಹರಣೆಗಳೊಂದಿಗೆ ತಿಳಿಸಲಾಯಿತು.

ಶಾಲೆಯ ಆಡಳಿತಾಧಿಕಾರಿ ಡಾ. ಹೆಚ್.ಎನ್. ಚಂದ್ರಶೇಖರ್ ಮಾತನಾಡಿ, ಪ್ರತಿ ವಿದ್ಯಾರ್ಥಿಯೂ ಕನಿಷ್ಟ ಒಂದೊಂದು ಸಸಿಯನ್ನು ನೆಟ್ಟು ಅದನ್ನು ಸಾಕಿ ಸಲಹಬೇಕು. ಪ್ರಕೃತಿ ಪ್ರೇಮಿಯಾಗಿ ಲಕ್ಷಾಂತರ ಮರಗಳನ್ನು ನೆಟ್ಟು ದೇಶಕ್ಕೆ ಮಾದರಿಯಾದ ಸಾಲುಮರದ ತಿಮ್ಮಕ್ಕ ಅವರ ಸೇವೆಯನ್ನು ಸ್ಮರಿಸಿ, ಅವರ ಜೀವನವು ಪ್ರತಿಯೊಬ್ಬರಿಗೂ ಸ್ಫೂರ್ತಿಯಾಗಬೇಕೆಂದರು. ವಿದ್ಯಾರ್ಥಿಗಳು ಸಹ ಪರಿಸರ ಸಂರಕ್ಷಣೆಯ ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

# ಪಕ್ಷ ಬಲವರ್ಧನೆಗಾಗಿ ಸ್ಥಳೀಯರಿಗೆ ಆದ್ಯತೆ ನೀಡಿ : ಹೇಮಂತ್‌ಗೌಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸ್ಥಳೀಯ ಶಾಸಕ ಕೆ.ಎಂ.ಶಿವಲಿಂಗೇಗೌಡರಿಗೆ ಉಸ್ತುವಾರಿ ಸ್ಥಾನ ನೀಡಿ ಪಕ್ಷ ಸಂಘಟನೆಗೆ ಆದ್ಯತೆ ನೀಡಬೇಕು ಎಂದು ಕಾಂಗ್ರೆಸ್ ಕಾರ್ಮಿಕ ಘಟಕದ ಜಿಲ್ಲಾಧ್ಯಕ್ಷ ಹೇಮಂತ್‌ಗೌಡ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿದ ಅವರು, ಲೋಕಸಭೆ ಸದಸ್ಯ ಶ್ರೇಯಸ್ ಪಟೇಲ್ ಮತ್ತು ಶಾಸಕ ಕೆ.ಎಂ.ಶಿವಲಿಂಗೇಗೌಡ ಮಾತ್ರ ಚುನಾಯಿತ ಪ್ರತಿನಿಧಿಗಳಿದ್ದಾರೆ. ಮುಂಬರುವ ಚುನಾವಣೆಗಳಲ್ಲಿ ಪಕ್ಷ ಹೆಚ್ಚಿನ ಸ್ಥಾನ ಗೆಲ್ಲಬೇಕೆಂದರೆ ಸ್ಥಳೀಯರೇ ಉಸ್ತುವಾರಿ ಸಚಿವರಾಗಿರಬೇಕು.

ಹೈಕಮಾಂಡ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಒಮ್ಮತದ ನಿರ್ಧಾರದಂತೆ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿದ್ದಾರೆ. ಅವರು ಮುಖ್ಯಮಂತ್ರಿಯಾಗಲಿ ಎಂದು ಹಾಸನಾಂಬ ದೇವಾಲಯ ಸೇರಿ ಜಿಲ್ಲೆಯ ಹಲವು ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಲಾಗಿತ್ತು. ಈಗ ಆ ಆಶಯ ಈಡೇರಿರುವುದರಿಂದ ಜಿಲ್ಲೆಯ ಜನರ ಪರವಾಗಿ ಅವರಿಗೆ ಅಭಿನಂದನೆ ಸಲ್ಲಿಸುತ್ತೇವೆಂದರು.

ಜಿಲ್ಲೆಯಲ್ಲಿರುವ ಕಾಂಗ್ರೆಸ್‌ನ ಏಕೈಕ ಶಾಸಕ ಕೆ.ಎಂ. ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ನೀಡುವುದು ಅತ್ಯಗತ್ಯವಾಗಿದೆ. ಅವರು ಪಕ್ಷದ ಸಂಘಟನೆಗೆ ದುಡಿಯುತ್ತಿದ್ದು, ಜಿಲ್ಲೆಯ ವಿವಿಧ ಭಾಗಗಳಲ್ಲಿ ಕಾಂಗ್ರೆಸ್ ಕಾರ್ಯಕರ್ತರನ್ನು ಒಗ್ಗೂಡಿಸುವ ಸಾಮರ್ಥ್ಯ ಹೊಂದಿದ್ದಾರೆ. ಸಚಿವ ಸ್ಥಾನ ದೊರೆತರೆ ಜಿಲ್ಲೆಯ ಅಭಿವೃದ್ಧಿ ಯೋಜನೆಗಳಿಗೆ ವೇಗ ಸಿಗುವುದರ ಜೊತೆಗೆ ಪಕ್ಷ ಸಂಘಟನೆಗೂ ಹೆಚ್ಚಿನ ಬಲ ದೊರೆಯಲಿದೆ ಎಂದರು.

ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳ ಪೈಕಿ ಅರಸೀಕೆರೆ ಹೊರತುಪಡಿಸಿ ಉಳಿದ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಸೋಲು ಅನುಭವಿಸಿದೆ. ಕೆಲವು ಕ್ಷೇತ್ರಗಳಲ್ಲಿ ಅಲ್ಪ ಮತಗಳ ಅಂತರದಿಂದ ಸೋಲಾಗಿದ್ದು, ಮುಂದಿನ ದಿನಗಳಲ್ಲಿ ಪಕ್ಷವನ್ನು ಬಲಪಡಿಸಿ ಎಲ್ಲಾ ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲುವು ಸಾಧಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಕಾಂಗ್ರೆಸ್ ಕಾರ್ಮಿಕ ಘಟಕದ ವತಿಯಿಂದ ಮನವಿ ಸಲ್ಲಿಸಲಾಗುವುದು. ಹಿರಿಯ ಮುಖಂಡ ಬಿ.ಶಿವರಾಮ್ ಅವರಿಗೆ ವಿಧಾನ ಪರಿಷತ್ ಸದಸ್ಯತ್ವ ನೀಡುವ ಮೂಲಕ ಪಕ್ಷದಲ್ಲಿ ಅವರ ಸೇವೆಯನ್ನು ಗುರುತಿಸಬೇಕು. ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಮತ್ತಷ್ಟು ಸದೃಢಗೊಳಿಸುವ ಉದ್ದೇಶದಿಂದ ಮುಂದಿನ ದಿನಗಳಲ್ಲಿ ವಿವಿಧ ಹಂತದ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಸಮಾಲೋಚನೆ ನಡೆಸಿ ಸಂಘಟನಾ ಚಟುವಟಿಕೆಗಳನ್ನು ತೀವ್ರಗೊಳಿಸಲಾಗುವುದು ಎಂದರು.

ಕಾಂಗ್ರೆಸ್ ಕಾರ್ಮಿಕ ಘಟಕದ ಉಪಾಧ್ಯಕ್ಷ ಮಧುಗೌಡ, ಪ್ರಧಾನ ಕಾರ್ಯದರ್ಶಿ ಪ್ರದೀಪ್, ಶಂಕರ್, ಲೋಕೇಶ್, ಕಮಲಮ್ಮ ಇತರರು ಉಪಸ್ಥಿತರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248